# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೨೯-೦೬-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ಕನ್ನಡ ಸಾಹಿತ್ಯ ಪರಿಷತ್ತಿನ 'ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿ' ಪ್ರಕಟ

ಬೆಂಗಳೂರು: **ಕನ್ನಡ ಸಾಹಿತ್ಯ ಪರಿಷತ್ತು ೨೦೧೮, ೨೦೧೯, ೨೦೨೦, ೨೦೨೧, ೨೦೨೨ ಹಾಗೂ ೨೦೨೩ ನೇ ಸಾಲಿನ 'ಡಾ.ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿ'** ಯನ್ನು ಪ್ರಕಟಿಸಲಾಗಿದೆ. ದಲಿತ ಸಾಹಿತ್ಯದಲ್ಲಿ ಗಣನೀಯ ಸಾಧನೆ ಮಾಡಿದ ಸಾಹಿತ್ಯ ಸಾಧಕರಿಗೆ ಈ ಪ್ರಶಸ್ತಿ ನೀಡಲಾಗುತ್ತದೆ. ಕಳೆದ ೬ ವರ್ಷಗಳಿಂದ ಈ ಪ್ರಶಸ್ತಿಯನ್ನು ಪ್ರದಾನ ಮಾಡದೇ ಇರುವುದರಿಂದ ಈ ಬಾರಿ ೬ ಜನ ಸಾಧಕರಿಗೆ ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿಯನ್ನೂ ಪ್ರಕಟಿಸಲಾಗಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೨೦೧೮ನೇ ಸಾಲಿನ **'ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ'** ಪ್ರಶಸ್ತಿಗಾಗಿ ದಲಿತ ಸಾಹಿತ್ಯ ಕ್ಷೇತ್ರದಲ್ಲಿ ಅಗಣಿತ ಸಾಧನೆ ಮಾಡಿರುವ **ಕೋಲಾರದ ಶ್ರೀ ಕೋಟಿಗಾನಹಳ್ಳಿ ರಾಮಯ್ಯ**, ೨೦೧೯ನೇ ಸಾಲಿನ ಪ್ರಶಸ್ತಿಗೆ **ಕಲಬುರಗಿಯ ಡಾ. ಎಚ್. ಟಿ. ಪೋತೆ,** ೨೦೨೦ ನೇ ಸಾಲಿನ ಪ್ರಶಸ್ತಿಗಾಗಿ **ವಿಜಯಪುರದ ಶ್ರೀಮತಿ ಇಂದುಮತಿ ಲಮಾಣಿ**, ೨೦೨೧ನೇ ಸಾಲಿನ ಪ್ರಶಸ್ತಿಗಾಗಿ **ಬೆಂಗಳೂರಿನ ಡಾ. ಕಾ.ವೆಂ. ಶ್ರೀನಿವಾಸಮೂರ್ತಿ**, ೨೦೨೨ನೇ ಸಾಲಿನ ಪ್ರಶಸ್ತಿಗಾಗಿ **ಗದಗದ ಡಾ. ಅರ್ಜುನ ಗೊಳಸಂಗಿ** ಹಾಗೂ ೨೦೨೩ನೇ ಸಾಲಿನ ಪ್ರಶಸ್ತಿಯನ್ನು **ಹಾಸನದ ಶ್ರೀ ನಾಗರಾಜ ಹೆತ್ತೂರು** ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶ್ರವಣಬೆಳಗೊಳದಲ್ಲಿ ನಡೆದ ೮೧ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸವಿ ನೆನಪಿಗಾಗಿ ಆ ಸಮ್ಮೇಳನದ ಸರ್ವಾಧ್ಯಕ್ಷರಾದ ಡಾ. ಸಿದ್ದಲಿಂಗಯ್ಯ ಅವರ ಹೆಸರಿನಲ್ಲಿ 'ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿಗಾಗಿ ಕನ್ನಡ ಸಾಹಿತ್ಯ ಪರಿಷತ್ತು** ದತ್ತಿ ನಿಧಿಯನ್ನು ಸ್ಥಾಪಿಸಿದೆ. ದಲಿತ ಸಾಹಿತ್ಯದಲ್ಲಿ ಗಣನೀಯ ಸಾಧನೆ ಮಾಡಿದವರಿಗೆ ಈ ಪ್ರಶಸ್ತಿಯನ್ನು ನೀಡಬೇಕು ಎನ್ನುವುದು ದತ್ತಿಯ ಮೂಲ ಆಶಯವಾಗಿದೆ. ಪ್ರಸ್ತುತ **'ಡಾ.ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿ'ಗೆ** ಆಯ್ಕೆಯಾಯಾಗಿರುವ ಎಲ್ಲಾ ಸಾಹಿತ್ಯ ಸಾಧಕರಿಗೆ ಕನ್ನಡ ಸಾಹಿತ್ಯ ಪರಿಷತ್ತು ಅಭಿನಂದಿಸಿ ಅವರ ಸಾಹಿತ್ಯ ಸೇವೆ ನಿರಂತರವಾಗಿರಲಿ ಎಂದು ಆಶಿಸುತ್ತದೆ. ಕನ್ನಡ ನಾಡಿನಲ್ಲಿ ದಲಿತ ಸಾಹಿತ್ಯ ಕ್ಷೇತ್ರಗಳಲ್ಲಿ ಅಪರಿಮಿತ ಸಾಧನೆ ಮಾಡಿರುವ ಗಣ್ಯರನ್ನು ಸೂಕ್ಷ್ಮವಾಗಿ ಗುರುತಿಸಿ ಪರಿಷತ್ತು ಸ್ಥಾಪಿಸಿರುವ ಈ ದತ್ತಿ ಆಶಯಕ್ಕೆ ಯಾವುದೇ ಚ್ಯುತಿಯಾಗದ ರೀತಿಯಲ್ಲಿ ಆಯ್ಕೆ ಸಮಿತಿ ಆಯ್ಕೆ ಮಾಡಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ. ಡಾ. ಮಹೇಶ ಜೋಶಿ** ಅವರು ಹೇಳಿದ್ದಾರೆ.

ಕೊರೋನಾ ಸೇರಿದಂತೆ ಇತರ ಕಾರಣಗಳ ಹಿನ್ನೆಲೆಯಲ್ಲಿ ಕಳೆದ ೬ ವರ್ಷಗಳಿಂದ **'ಡಾ.ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿ'** ಪ್ರಶಸ್ತಿಯ ಪ್ರಕಟಣೆ ಬಾಕಿ ಇತ್ತು. ಪ್ರಸ್ತುತ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷರ ಅವಧಿಯಲ್ಲಿ ಬಾಕಿ ಉಳಿದಿರುವ ಎಲ್ಲಾ ವರ್ಷಗಳ ದತ್ತಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತಿದೆ. ಈ ಪ್ರಶಸ್ತಿಯು ೧೦,೦೦೦(ಹತ್ತು ಸಾವಿರ)ರೂ. ನಗದು, ಸ್ಮರಣಿಕೆ ಹಾಗೂ ಫಲ ತಾಂಬೂಲಗಳನ್ನೂ ಒಳಗೊಂಡಿರುತ್ತದೆ. ಇದುವರೆಗೆ ಇಬ್ಬರಿಗೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟಣೆಯಲ್ಲಿ ತಿಳಿಸಿದೆ.

**ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿಯಲ್ಲಿ ಶ್ರೀಮತಿ ರಮಾಕುಮಾರಿ, ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಡಾ. ಪದ್ಮಿನಿ ನಾಗರಾಜು, ಶ್ರೀ ನೇ.ಭ.ರಾಮಲಿಂಗ ಶೆಟ್ಟಿ ಹಾಗೂ ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಂ.ಪಟೇಲ್ ಪಾಂಡು** ಅವರು ಉಪಸ್ಥಿತರಿದ್ದರು.

---

ಛಾಯಾಚಿತ್ರಗಳು

ಫೋಟೋ-೧- ಶ್ರೀ ಕೋಟಿಗಾನಹಳ್ಳಿ ರಾಮಯ್ಯ,

ಫೋಟೋ-೨- ಡಾ. ಎಚ್. ಟಿ. ಪೋತೆ,

ಫೋಟೋ-೩- ಶ್ರೀಮತಿ ಇಂದುಮತಿ ಲಮಾಣಿ,

ಫೋಟೋ-೪- ಡಾ. ಕಾ.ವೆಂ. ಶ್ರೀನಿವಾಸಮೂರ್ತಿ,

ಫೋಟೋ-೫- ಡಾ. ಅರ್ಜುನ ಗೊಳಸಂಗಿ

ಫೋಟೋ-೬- ಶ್ರೀ ನಾಗರಾಜ ಹೆತ್ತೂರು

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು